ಅ) ಇದುವರೆಗೆ ಅಧಿಕೃತವಾಗಿ ಕಚೇರಿ ಪ್ರಾರಂಭಿಸದಿರಲು ಕಾರಣಗಳೇನು 2-3 ಬಾರಿ ಪ್ರಾರಂಭೋತ್ಸವ ಸಿದ್ದತೆ-ನಡೆಸಿ ಮಧ್ಯದಲ್ಲೇ ನಿಂತುಹೋದ ಸಂಗತಿ ಸರ್ಕಾರಕ್ಕೆ ತಿಳಿದಿದೆಯೇ?

ಇ) ಸಾರ್ವಜನಿಕ ಹಿತದೃಷ್ಟಿಯಿಂದ ಉದ್ಘಾಟ ಮಾಡುವುದು ಯಾವಾಗ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು) :

ಅ) ಹೌದು.

ಆ) ಹೌದು.

ಇ) ಔರಾದ್ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆಯನ್ನು ಶೀಘ್ರವಾಗಿ ತೆರೆಯಲು ಕ್ರಮತೆಗೆದುಕೊಳ್ಳಲಾಗುವುದು.

ಪೌರಾಡಳಿತ ಇಲಾಖೆಯಲ್ಲಿ ಅಧಿಕಾರಗಳ ಅವ್ಯವಹಾರ

1024 (1362) - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪೌರಾಡಳಿತ ಇಲಾಖೆಯಲ್ಲಿ ಎಷ್ಟು ಮಂದಿ ಕಾರ್ಯ ನಿರ್ವಾಹಕ ಅಧಿಕಾರಿಗಳು ಲೋಕಾಯುಕ್ತ ಬಲೆಗೆ ಸಿಕ್ಕಿದ್ದಾರೆ; ಎಷ್ಟು ಮಂದಿ ವಿರುದ್ಧ ಪ್ರಕರಣ ಹೊರಡಿಸಲಾಗಿದೆ;

ಆ) ಎಷ್ಟು ಮಂದಿ ನಿಲಂಬನೆಯಲ್ಲಿದ್ದಾರೆ;

ಇ) ತಿಳಿದ ವರಮಾನಕ್ಕಿಂತ ಹೆಚ್ಚಿನ ಆಸ್ತಿ ಪಾಸ್ತಿ ಹೊಂದಿರುವ ಎಷ್ಟು ಪ್ರಕಣಗಳು ಸರ್ಕಾರದ ಗಮನಕ್ಕೆ ಬಂದಿದೆ;

ಈ) ಎಷ್ಟು ಪ್ರಕರಣಗಳನ್ನು ವಿಚಾರಣೆಗೆ ಒಳಪಡಿಸಲಾಗಿದೆ ಹಾಗೂ ಆರೋಪಿಗಳಿಗೆ ಶಿಕ್ಷೆ ವಿಧಿಸಲಾಗಿದೆ?

ಶ್ರೀ ಕುಮಾರ್ ಬಂಗಾರಪ್ಪ ಎಸ್. (ಪೌರಾಡಳಿತ ರಾಜ್ಯ ಸಚಿವರು) :

ಅ) 17

ಆ) ಪ್ರಸ್ತುತ ನಿಲಂಬನೆಯಲ್ಲಿ ಯಾರೂ ಇರುವುದಿಲ್ಲ.

ಇ) ಯಾವುದೂ ಇರುವುದಿಲ್ಲ.

ಈ) ಎಲ್ಲಾ ಪ್ರಕರಣಗಳನ್ನು ವಿಚಾರಣೆಗೆ ಒಳಪಡಿಸಿದೆ 2 ಪ್ರಕರಣಗಳಲ್ಲಿ ನ್ಯಾಯಾಲಯದಿಂದ ಖುಲಾಸೆ ಆಗಿದೆ. ಇತರೆ ಪ್ರಕರಣಗಳು ಇತ್ಯರ್ಥಗೊಂಡಿರುವುದಿಲ್ಲ.

ಬೆಂಗಳೂರು ಪ್ರಾದೇಶಿಕ ಸಾರಿಗೆ ಕಛೇರಿಗಳು

1025 (1364) - ಶ್ರೀ ಗುರುಸ್ವಾಮಿ ಎ.ಎಸ್. ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಎಷ್ಟು ಪ್ರಾದೇಶಿಕ ಸಾರಿಗೆ ಕಛೇರಿಗಳಿವೆ?

ಆ) ಇವುಗಳಲ್ಲಿ ಯಾವ ಯಾವ ಕಛೇರಿಗಳ ಮೇಲೆ ದೂರು ಬಂದಿದೆ ಯಾವ ಸಿಬ್ಬಂದಿಯ ಮೇಲೆ ತಿಳಿದ ಪ್ರಮಾಣಕ್ಕಿಂತ ಹೆಚ್ಚಿನ ಆಸ್ತಿಗಳಿಸಿರುವ ದೂರು ಬಂದಿದೆ?

ಇ) ಎಷ್ಟು ಪ್ರಕರಣಗಳಲ್ಲಿ ಲೋಕಾಯುಕ್ತಕ್ಕೆ ದೂರು ಸಲ್ಲಿಸಲಾಗಿದೆ; ಎಷ್ಟು ಪ್ರಕರಣಗಳನ್ನು ನೋಂದಾಯಿಸಿಕೊಳ್ಳಲಾಗಿದೆ?

ಈ) ಎಷ್ಟು ಪ್ರಕರಣಗಳನ್ನು ಲೋಕಾಯುಕ್ತ ವಿಚಾರಣೆ ಇಲ್ಲವೇ ಇಲಾಖಾ ವಿಚಾರಣೆಗೆ ವಹಿಸಲಾಗಿದೆ; ಅವು ಯಾವ ಹಂತದಲ್ಲಿದೆ?

ಉ) ಪ್ರಕರಣಗಳ ಶೀಘ್ರ ವಿಲೇವಾರಿಗೆ ಕೈಗೊಳ್ಳಲಾಗಿರುವ ಕ್ರಮಗಳೇನು?

ಶ್ರೀ ಬಿ. ರಮಾನಾಥ್ ರೈ (ಸಾರಿಗೆ ಸಚಿವರು) :

ಅ) ಐದು ಪ್ರಾದೇಶಿಕ ಸಾರಿಗೆ ಕಛೇರಿಗಳಿವೆ.

ಆ) ಮಾನ್ಯ ಲೋಕಾಯುಕ್ತರ ದಿನಾಂಕ: 22-05-2002 ರಂದು ಬೆಂಗಳೂರು ದಕ್ಷಿಣ) ಪ್ರಾದೇಶಿಕ ಸಾರಿಗೆ ಕಛೇರಿಗೆ ಭೇಟಿ ನೀಡಿ ಶೋಧಿಸಿ ಅಭಿಗ್ರಹಣ ಮಾಡಿ. ಮುಂದಿನ ಕ್ರಮಕ್ಕಾಗಿ ಸಾರಿಗೆ ಆಯುಕ್ತರಿಗೆ ಪತ್ರ ಬರೆದಿರುತ್ತಾರೆ.

ಇ) ಇಲಾಖಾ ಮತಿಯಿಂದ ಲೋಕಾಯುಕ್ತಕ್ಕೆ ಯಾವುದೇ ದೂರು ಸಲ್ಲಿಸಲಾಗಿಲ್ಲ.

ಈ) ಮೇಲಿನ ಪ್ರಕರಣ ಹೊರತುಪಡಿಸಿ ಬೇರಾವುದೂ ಇರುವುದಿಲ್ಲ.

ಉ) ಪ್ರಶ್ನೆ ಉದ್ಭವಿಸುವುದಿಲ್ಲ.

ಮೈಸೂರು ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ಅಕ್ರಮ ಗಳಿಕೆ

1026 (1365) - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ಅಕ್ರಮ ಗಳಿಕೆ ಬಗ್ಗೆ ಲೋಕಾಯುಕ್ತಕ್ಕೆ ಸಲ್ಲಿಸಿರುವ ಪ್ರಕರಣಗಳು ಎಷ್ಟು?

ಆ) ಈ ಪ್ರಕರಣಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ?

ಇ) ಎಷ್ಟು ಪ್ರಕರಣಗಳಲ್ಲಿ ಕಾನೂನು ಕ್ರಮ ಜರುಗಿಸಲಾಗಿದೆ; ಎಷ್ಟು ಪ್ರಕರಣಗಳಲ್ಲಿ ಇಲಾಖಾ ವಿಚಾರಣೆ ಮಾಡಲಾಗಿದೆ?

ಈ) ಈ ಪ್ರಕರಣಗಳ ಶೀಘ್ರ ವಿಲೇವಾರಿಗೆ ಏನು ಕ್ರಮ ಕೈಗೊಳ್ಳಲಾಗಿದೆ; ಸಾರ್ವಜನಿಕರಿಗೆ ತೊಂದರೆಯಾಗದಂತೆ ಪ್ರಕರಣಗಳ ಶೀಘ್ರ ವಿಲೇವಾರಿಗೆ ಕೈಗೊಂಡಿರುವ ಕ್ರಮವೇನು?

ಶ್ರೀ ಬಿ. ರಮಾನಾಥ್ ರೈ (ಸಾರಿಗೆ ಸಚಿವರು) :

ಅ) ಯಾವುದೇ ಪ್ರಕರಣಗಳಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಬೆಂಗಳೂರು ನಗರ ಗ್ರಾಮಾಂತರ ಜಿಲ್ಲೆಯಲ್ಲಿ ಡಿಸ್ಟಿಲರಿಗಳ ಕಾರ್ಯ ನಿರ್ವಹಣೆ

1027 (1366) - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2001-02ನೇ ಸಾಲಿನಲ್ಲಿ ಬೆಂಗಳೂರು ಜಿಲ್ಲೆಯಲ್ಲಿ ಕೆಲಸ ಮಾಡುತ್ತಿರುವ ಡಿಸ್ಟಲರಿಗಳು ಯಾವುವು; ಅವಕ್ಕೆ ಮಾಸಿಕವಾಗಿ ತಯಾರು ಮಾಡಲು ಅನುಮತಿ ನೀಡಿರುವ ಮದ್ಯದ ಪ್ರಮಾಣ ಎಷ್ಟು?